ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ರಸ್ತೆ ನಿರ್ಮಾಣ ಕಾಮಗಾರಿಗೆ ವಶಪಡಿಸಿಕೊಂಡ ಭೂಮಿಗೆ ಪರಿಹಾರ ಕುರಿತು

ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

302 (305) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲೆಯ, ನಾಗಮಂಗಲ ತಾಲ್ಲೂಕು, ದೇವಲಾಪುರ ಹೋಬಳಿ, ಕುಡುಗುಬಾಳು ಗ್ರಾಮದ ಸ.ನಂ. 24/ಸಿರಲ್ಲಿ ಸರ್ಕಾರ ರಸ್ತೆ ನಿರ್ಮಾಣ ಕಾಮಗಾರಿ ಕೈಗೊಂಡಿದೆಯೇ ;

(ಆ) ಕೈಗೊಂಡಿದ್ದಲ್ಲಿ, ಸದರಿ ಸರ್ವೆ ನಂ. 24/ಸಿಗೆ ನಿಯಮಾನುಸಾರ ಪರಿಹಾರದ ಮೊತ್ತವನ್ನು ಪಾವತಿಸಲಾಗಿದೆಯೇ ; ಅಥವಾ ಇಲ್ಲವೇ;

(ಇ) ಈ ಸರ್ವೆ ನಂ. 24/ಸಿರ ಮಾಲೀಕರು ಯಾರು ; ಇವರು ಎಷ್ಟು ವರ್ಷಗಳಿಂದ ಸದರಿ ಭೂಮಿಯ ಮಾಲೀಕತ್ವವನ್ನು ಹೊಂದಿದ್ದಾರೆ ; (ಸಂಬಂಧಪಟ್ಟ ದಾಖಲೆಗಳನ್ನು ಒದಗಿಸುವುದು)

(ಈ) ಸದರಿ ಕುಡುಗುಬಾಳು ಗ್ರಾಮದಲ್ಲಿ ರಸ್ತೆ ಕಾಮಗಾರಿಗಾಗಿ ಯಾರ್ಯಾರ ಜಮೀನುಗಳನ್ನು ವಶಪಡಿಸಿಕೊಂಡು ಪರಿಹಾರ ನೀಡಲಾಗಿದೆ?